ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 6–9–2017

## ಪತ್ರಿಕಾ ಆಮಂತ್ರಣ

1. ಕಾವೇರಿ ಲಾಯಲ್ಟಿ ಕಾರ್ಡ್ ಹಾಗೂ ಕಾವೇರಿ ಗಿಫ್ಟ್ ಕಾರ್ಡ್‌ಗಳ ಪರಿಚಯ ಕಾರ್ಯಕ್ರಮ –ಪತ್ರಿಕಾಗೋಷ್ಠಿ:

ಡಾ: ಎಂ.ಸಿ. ಮೋಹನ ಕುಮಾರಿ (ಗೀತಾ)

ಸಣ್ಣ ಕೈಗಾರಿಕೆ ಸಚಿವರು

ದಿ: 7–9–2017 ಗುರುವಾರ ಸಮಯ: ಬೆಳಿಗ್ಗೆ 10–30 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 328, ವಿಧಾನ ಸೌಧ ಮೂರನೇ ಮಹಡಿ, ಬೆಂಗಳೂರು

2. ಪತ್ರಿಕಾಗೋಷ್ಠಿ:

ಆರ್.ವಿ. ದೇಶಪಾಂಡೆ,

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

ದಿನಾಂಕ : 07–09–2017 ಗುರುವಾರ, ಅಪರಾಹ್ನ 12–00 ಗಂಟೆಗೆ

ಸ್ಥಳ: ಕೊಠಡಿ ಸಂಖ್ಯೆ 334, ಸಮ್ಮೇಳನ ಸಭಾಂಗಣ, ಮೂರನೇ ಮಹಡಿ, ವಿಧಾನಸೌಧ.

ಸಂಖ್ಯೆ 28/154

## ಪತ್ರಿಕಾ ಪ್ರಕಟಣೆ

## ಗೌರಿ ಲಂಕೇಶ್ ಹತ್ಯೆ ಪ್ರಕರಣದ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಲು ಮುಖ್ಯಮಂತ್ರಿ ಸೂಚನೆ

ಬೆಂಗಳೂರು, ಸೆಪ್ಟೆಂಬರ್ 6 ( ಕರ್ನಾಟಕ ವಾರ್ತೆ) :

ಹೆಸರಾಂತ ಚಿಂತಕಿ, ಸುಪ್ರಸಿದ್ಧ ವಿಚಾರವಾದಿ ಹಾಗೂ ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಅವರ ಹತ್ಯೆ ಪ್ರಕರಣದ ತನಿಖೆಗೆ ಆರಕ್ಷಕ ಮಹಾ ನಿರೀಕ್ಷಕ ( ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ) ದರ್ಜೆಯ ಅಧಿಕಾರಿಯ ನೇತೃತ್ವದಲ್ಲಿ ವಿಶೇಷ ತನಿಖಾ ತಂಡ ರಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರಾಜ್ಯ ಆರಕ್ಷಕ ಮಹಾ ನಿರ್ದೇಶಕ ಹಾಗೂ ಮಹಾ ನಿರೀಕ್ಷಕ ರೂಪಕ್ ಕುಮಾರ್ ದತ್ತ ಅವರಿಗೆ ಇಲ್ಲಿ ಇಂದು ಸೂಚಿಸಿದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಾನ ಸೌಧದ ತಮ್ಮ ಕೊಠಡಿಯಲ್ಲಿ ಗೃಹ ಸಚಿವರೊಂದಿಗೆ ಹಿರಿಯ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದ ಬಳಿಕ ಸಿದ್ದರಾಮಯ್ಯ ಅವರು ತುರ್ತು ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಈ ಪ್ರಕರಣವನ್ನು ರಾಜ್ಯ ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದೆ. ಆದಕಾರಣ, ಸಿ ಐ ಡಿ ತನಿಖೆಯ ಬದಲು ವಿಶೇಷ ತನಿಖಾ ತಂಡ ರಚಿಸಿ ತನಿಖೆ ನಡೆಸಲು ಆದೇಶಿಸಲಾಗಿದೆ. ವಿಶೇಷ ತನಿಖಾ ತಂಡದ ಮುಖ್ಯಸ್ಥರ ಆಯ್ಕೆಯನ್ನು ಗೃಹ ಸಚಿವ ರಾಮಲಿಂಗಾ ರೆಡ್ಡಿ ಅವರೊಂದಿಗೆ ಸಮಾಲೋಚಿಸಿ ರಾಜ್ಯ ಆರಕ್ಷಕ ಮಹಾ ನಿರ್ದೇಶಕ ಹಾಗೂ ಮಹಾ ನಿರೀಕ್ಷಕರು ಅಂತಿಮಗೊಳಿಸುತ್ತಾರೆ. ತನಿಖೆಯ ತೀವ್ರತೆಗೆ ಅನುವಗುವಂತೆ ತಂಡಕ್ಕೆ ಯಾವ ಅಧಿಕಾರಿ ಬೇಕು. ಎಷ್ಟು ಅಧಿಕಾರಿಗಳು ಬೇಕು ಎಷ್ಟು ಮಂದಿಯ ಅವಶ್ಯಕತೆ ಇದೆಯೋ ಅಷ್ಟೂ ಮಂದಿಯನ್ನು ಆಯ್ಕೆ ಮಾಡಿ ಕೊಳ್ಳುವ ಸ್ವಾತಂತ್ರ್ಯವನ್ನು ತಂಡದ ಮುಖ್ಯಸ್ಥರಿಗೆ ನೀಡಲಾಗಿದೆ ಎಂದು ಸಭೆಯಲ್ಲಿ ಸ್ಪಷ್ಟಪಡಿಸಿದ್ದೇನೆ ಎಂದರು.

ಗೌರಿ ಲಂಕೇಶ್ ಹತ್ಯೆ ಪ್ರಕರಣವನ್ನು ಕೇಂದ್ರ ತನಿಖಾ ದಳ ( ಸಿ ಬಿ ಐ ) ಕ್ಕೆ ವಹಿಸುವಂತೆ ಅವರ ಸಹೋದರ ಇಂದ್ರಜಿತ್ ಲಂಕೇಶ್ ಅವರು ಒತ್ತಾಯಿಸಿದ್ದಾರೆ ಎಂಬ ವಿಷಯವನ್ನು ಪ್ರಸ್ತಾಪಿಸಿ ಮುಖ್ಯಮಂತ್ರಿಯವರ ಪ್ರತಿಕ್ರಿಯೆ ಬಯಸಿದಾಗ ಈ ಪ್ರಕರಣವನ್ನು ಸಿ ಬಿ ಐ ಗೆ ವಹಿಸಲು ರಾಜ್ಯ ಸರ್ಕಾರದ ಅಭ್ಯಂತರವೇನಿಲ್ಲ. ಸಿ ಬಿ ಐ ತನಿಖೆಗೆ ಅವರ ಕುಟುಂಬಸ್ಥರು ಬೇಡಿಕೆ ಇಟ್ಟಲ್ಲಿ, ಕುಟುಂಬಸ್ಥರ ಮನವಿಯನ್ನು ನಮ್ಮ ಸರ್ಕಾರ ತೆರೆದ ಮನಸ್ಸಿನಿಂದ ಪರಿಗಣಿಸಲಿದೆ ಎಂದು ಮುಖ್ಯಮಂತ್ರಿ ವಿವರಿಸಿದರು.

ಸಿ ಸಿ ಟಿ ವಿ ಯಲ್ಲಿ ಅಂತಿಮ ಕ್ಷಣಗಳು

ಗೌರಿ ಲಂಕೇಶ್ ಅವರ ಮನೆಯ ಸುತ್ತ-ಮುತ್ತ ಅಳವಡಿಸಿದ್ದ ನಾಲ್ಕು ಕ್ಲೋಸ್ ಸರ್ಕ್ಯೂಟ್ ಟೆಲೆವಿಷನ್ ( ಸಿ ಸಿ ಟಿ ವಿ ) ಕ್ಯಾಮರಾಗಳಲ್ಲಿ ದಾಖಲಾಗಿದ್ದ ಚಿತ್ರಾವಳಿಗಳನ್ನು ಪೊಲೀಸರು ಪರಿಶೀಲಿಸಿದ್ದಾರೆ. ಗೌರಿ ಲಂಕೇಶ್ ಅವರು ರಾಜರಾಜೇಶ್ವರಿ ನಗರದಲ್ಲಿರುವ ತಮ್ಮ ನಿವಾಸಕ್ಕೆ ಮಂಗಳವಾರ ರಾತ್ರಿ ಬಂದಾಗ, ಶಿರಸ್ತ್ರಾಣಧಾರಿ (ಹೆಲ್ಮೆಟ್ ಧರಿಸಿದ್ದ) ವ್ಯಕ್ತಿಯೊಬ್ಬ ಬಿಂದು ಶೂನ್ಯ ವಲಯ ( ಪಾಯಿಂಟ್ ಬ್ಲ್ಯಾಂಕ್ ರೇಂಜ್) ದಿಂದ ಗುಂಡಿನ ಮಳೆಗರೆಯುವುದು ಮನೆಯ ಬಾಗಿಲ ಬಳಿ ಅಳವಡಿಸಿರುವ ಸಿ ಸಿ ಟಿ ವಿ ದೃಶ್ಯಾವಳಿಯಲ್ಲಿ ದಾಖಲಾಗಿದೆ. ತಮ್ಮ ದೇಹಕ್ಕೆ ಗುಂಡು ಬಿದ್ದ ನಂತವೂ ಗೌರಿ ಲಂಕೇಶ್ ಅವರು ಮನೆಯ ಬಾಗಿಲತ್ತ ನಾಲ್ಕೈದು ಹೆಜ್ಜೆ ಹಾಕಿ, ನಂತರ ಅಲ್ಲೇ ಕುಸಿದು ಬಿದ್ದಿದ್ದಾರೆ. ಕೊನೆಯುಸಿರೆಳೆದಿದ್ದಾರೆ. ಇದು ಆಕೆಯ ಅಂತಿಮ ಕ್ಷಣಗಳು. ಆದರೆ, ಪ್ರಕರಣದಲ್ಲಿ ಭಾಗಿಯಾಗಿರುವುದು ಒಬ್ಬ ಹಂತಕನೇ ?

ಹಂತಕರ ಸಂಖ್ಯೆ ಎಷ್ಟು ? ಹತ್ಯೆಗೆ ಮುನ್ನ ಆಗಮಿಸಿದ ವಾಹನ ಅಥವಾ ವಾಹನಗಳ ವಿವರ ತಿಳಿದು ಬಂದಿಲ್ಲ ಎಂದು ಸಿದ್ದರಾಮಯ್ಯ ಅವರು ಮಾಧ್ಯಮದವರ ಪ್ರಶ್ನೆಗಳಿಗೆ ಉತ್ತರಿಸಿದರು.

ನನಗೂ ದಿಗ್ಭಮೆ

ಗೌರಿ ಲಂಕೇಶ್ ಅವರ ಹತ್ಯೆ ಎಡಪಂಥೀಯ ಚಳುವಳಿಗಳಿಗೆ ಭರಿಸಲಾಗದ ನಷ್ಟವನ್ನು ಉಂಟು ಮಾಡಿದೆ. ಇದೊಂದು ವ್ಯವಸ್ಥಿತ ಸಂಚು. ಈ ಷಡ್ಯಂತ್ರವನ್ನು ಯಾರು ರೂಪಿಸಿದ್ದಾರೆ ? ಎಲ್ಲಿ ರೂಪಿಸಿದ್ದಾರೆ ? ಎಂಬುದರ ಬಗ್ಗೆ ಈಗಲೇ ಏನನ್ನೂ ಹೇಳಲಾಗದು.

ಗೌರಿ ಲಂಕೇಶ್ ಅವರ ಹತ್ಯೆ ಪ್ರಕರಣ ನನ್ನಲ್ಲೂ ದಿಗ್ಭ್ರಮೆ ಮೂಡಿಸಿದೆ. ಆಕೆ ನನಗೂ ಆಪ್ತಳಾಗಿದ್ದವಳು. ಆಕೆಯ ತಂದೆ ಪಿ. ಲಂಕೇಶ್ ಅವರ ಕಾಲದಿಂದಲೂ ಆಕೆ ನನಗೆ ಪರಿಚಿತಳು. ತಮ್ಮನ್ನು ಹಲವಾರು ಬಾರಿ ಭೇಟಿ ಮಾಡಿದ್ದರೂ, ಯಾವ ಸಂದರ್ಭದಲ್ಲೂ ಆಕೆ ತನಗೆ ಜೀವ ಬೆದರಿಕೆ ಇದೆ ಎಂಬ ವಿಷಯವನ್ನು ತಮ್ಮಲ್ಲಿ ಹಂಚಿಕೊಂಡಿರಲಿಲ್ಲ ಎಂಬ ಮಾಹಿತಿಯನ್ನು ಮಾಧ್ಯಮದವರೊಂದಿಗೆ ಮುಖ್ಯಮಂತ್ರಿ ಹಂಚಿ ಕೊಂಡರು.

ಪ್ರಗತಿಪರ ಚಿಂತಕರಿಗೆ ಭದ್ರತೆ

ಸಾಮಾಜಿಕ ಜಾಲ ತಾಣಗಳಲ್ಲಿನ ವಿಚಾರ ವಿನಿಮಯಗಳ ಮೇಲೆ ನಿಗಾ ಇರಿಸುವಂತೆ ಪೊಲೀಸರಿಗೆ ಸೂಚಿಸಲಾಗಿದೆ. ಅಲ್ಲದೆ, ರಾಜ್ಯದಲ್ಲಿರುವ ಪ್ರಗತಿಪರ ಚಿಂತಕರನ್ನು ಗುರುತಿಸಿ, ಅವರೆಲ್ಲರಿಗೂ ಸೂಕ್ತ ಭದ್ರತೆಯನ್ನು ಒದಗಿಸುವಂತೆಯೂ ಪೊಲೀಸರಿಗೆ ನಿರ್ದೇಶನ ನೀಡಲಾಗಿದೆ ಎಂದು ಸಿದ್ದರಾಮಯ್ಯ ಅವರು ಪ್ರಕಟಿಸಿದರು.

ಸಾಮ್ಯತೆಯ ಬಗ್ಗೆ ಈಗಲೇ ಸ್ಪಷ್ಟತೆ ನೀಡಲು ಸಾಧ್ಯವಿಲ್ಲ

ಮಹಾರಾಷ್ಟ್ರದಲ್ಲಿ ನಡೆದ ವಿಚಾರವಾದಿ ನರೇಂದ್ರ ಅಚ್ಯುತ್ ದಾಭೋಲ್ಕರ್, ಎಡಪಂಥೀಯ ಚಿಂತಕ ಗೋವಿಂದ್ ಪನ್ಸಾರೆ, ಕರ್ನಾಟಕದ ಹೆಸರಾಂತ ಚಿಂತಕ, ವಿಚಾರವಾದಿ ಹಾಗೂ ಸಾಹಿತಿ ಡಾ ಎಂ ಎಂ ಕಲ್ಬುರ್ಗಿ ಹತ್ಯಾ ಪ್ರಕರಣಗಳಲ್ಲಿ ಬಳಕೆಯಾದ ಶಸ್ತ್ರವೂ ಸೇರಿದಂತೆ ಹತ್ಯೆಯ ಶೈಲಿಯಲ್ಲಿ ಕೆಲವು ಸಾಮ್ಯತೆಗಳಿವೆ. ಆದರೆ, ಆ ಪ್ರಕರಣಗಳಿಗೂ ಈ ಪ್ರಕರಣಗಳಿಗೂ ಸಾಮ್ಯತೆ ಇದೆಯೇ ? ಇಲ್ಲವೇ ? ಎಂಬ ಬಗ್ಗೆ ಸ್ಪಷ್ಟತೆ ನೀಡಲು ಈಗಲೇ ಸಾಧ್ಯವಿಲ್ಲ. ಈ ಪ್ರಕರಣದ ತನಿಖೆ ಇನ್ನೂ ಪ್ರಾಥಮಿಕ ಹಂತದಲ್ಲಿದೆ ಎಂಬುದನ್ನು ನಾವು ಗಮನಿಸಬೇಕು ಎಂದು ಮುಖ್ಯಮಂತ್ರಿ ಸೂಚ್ಯವಾಗಿ ತಿಳಿಸಿದರು.

ದಾಭೋಲ್ಕರ್ ಹತ್ಯಾ ಪ್ರಕರಣವನ್ನು ಸಿ ಬಿ ಐ ತನಿಖೆ ನಡೆಸುತ್ತಿದೆ. ಪನ್ಸಾರೆ ಹತ್ಯಾ ಪ್ರಕರಣವನ್ನು ಮಹಾರಾಷ್ಟ್ರ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಅಂತೆಯೇ, ಡಾ ಎಂ ಎಂ ಕಲ್ಬುರ್ಗಿ ಹತ್ಯಾ ಪ್ರಕರಣವನ್ನು ಸಿ ಐ ಡಿ ತನಿಖೆ ನಡೆಸುತ್ತಿದೆ. ಈ ಮೂರೂ ತನಿಖಾ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸುವಂತೆ ರಾಜ್ಯದ ಪೊಲೀಸರಿಗೆ ಸೂಚಿಸಲಾಗಿದೆ. ಅಲ್ಲದೆ, ದಾಭೋಲ್ಕರ್ ಹತ್ಯಾ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿ ಬಿ ಐ ವಶಕ್ಕೆ ಪಡೆದಿರುವ ವ್ಯಕ್ತಿಯ ವಿಚಾರಣೆಯ ಸಂದರ್ಭದಲ್ಲಿ ರಾಜ್ಯದ ಪೊಲೀಸರೂ ಹಾಜರಿದ್ದರು ಎಂಬ ಅಂಶವನ್ನು ಸಿದ್ದರಾಮಯ್ಯ ಅವರು ಬಹಿರಂಗಪಡಿಸಿದರು.

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಉತ್ತಮ

ಡಾ ಎಂ ಎಂ ಕಲ್ಬುರ್ಗಿ ಹಾಗೂ ಗೌರಿ ಲಂಕೇಶ್ ಅವರ ಹತ್ಯಾ ಪರಕರಣಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹದೆಗೆಟ್ಟಿದೆ ಎಂಬ ಆರೋಪವನ್ನು ತಳ್ಳಿಹಾಕಿದ ಸಿದ್ದರಾಮಯ್ಯ ಅವರು ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಉತ್ತಮವಾಗಿದೆ ಎಂದು ಸಮರ್ಥಿಸಿಕೊಂಡರು.

ಗೃಹ ಸಚಿವ ರಾಮಲಿಂಗಾ ರೆಡ್ಡಿ, ಸಮಾಜ ಕಲ್ಯಾಣ ಸಚಿವ ಹೆಚ್. ಆಂಜನೇಯ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿ ಎಲ್ ಕೆ ಅತೀಕ್ ಅವರೂ ಒಳಗೊಂಡಂತೆ ಹಿರಿಯ ಅಧಿಕಾರಿಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

ಡಿ ಪಿ ಎಂ

ಸಂಖ್ಯೆ 29/155

# ಕರ್ನಾಟಕದಲ್ಲಿ ದೇಶದ ಪ್ರಥಮ ಕೃಷಿ ಬೆಲೆ ಆಯೋಗ

**ಬೆಂಗಳೂರು, ಸೆಪ್ಟೆಂಬರ್ 6 ( ಕರ್ನಾಟಕ ವಾರ್ತೆ) :**

ದೇಶದಲ್ಲಿಯೇ, ಕರ್ನಾಟಕ ರಾಜ್ಯದ ಬೆಂಗಳೂರಿನಲ್ಲಿ ಮಾತ್ರ ಭಾರತೀಯ ತೋಟಗಾರಿಕೆ ನಿರ್ವಹಣಾ ಸಂಸ್ಥೆ ಇದೆ. ಇದರ ಉಪಯೋಗವನ್ನು ನಮ್ಮ ರೈತರು ಮತ್ತು ಸಂಘ ಸಂಸ್ಥೆಗಳು ಪಡೆದುಕೊಂಡು, ರೈತರ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಸಿಗುವ ರೀತಿ ವ್ಯವಸ್ಥೆ ಮಾಡಬೇಕು ಎಂದು ಭಾರತೀಯ ತೋಟಗಾರಿಕೆ ನಿರ್ವಹಣಾ ಸಂಸ್ಥೆಯ ಅಧ್ಯಕ್ಷ ಡಾ. ವಿ.ಜಿ.ಧನಕುಮಾರ್ ಅವರು ಹೇಳಿದರು.

ಇಂದು ಭಾರತೀಯ ತೋಟಗಾರಿಕೆ ನಿರ್ವಹಣಾ ಸಂಸ್ಥೆ ಹಾಗು ಕರ್ನಾಟಕ ಕೃಷಿ ಬೆಲೆ ಆಯೋಗದ ಸಹ ಭಾಗಿತ್ವದಲ್ಲಿ ನಡೆಯುತ್ತಿರುವ ವಿವಿಧ ತೋಟಗಾರಿಕಾ ಬೆಳೆಗಳಿಗೆ ಸಂಬಂಧಪಟ್ಟ ಸಂಘ ಸಂಸ್ಥೆಗಳ ಬಲವರ್ಧನಾ ಕಾರ್ಯಗಾರವನ್ನು ಉದ್ದೇಶಿಸಿ ಮಾತನಾಡುತ್ತಾ ರಾಜ್ಯ, ಕೇಂದ್ರ ಮತ್ತು ಮಾರುಕಟ್ಟೆಗಳು ಒಂದಾಗಬೇಕು, ಆಗ ನಮ್ಮ ರೈತರ ಉತ್ಪನ್ನಗಳಿಗೆ ಉತ್ತಮ ಬೆಲೆ ಸಿಗುತ್ತದೆ. ರೈತರು ನಮ್ಮ ದೇಶದ ಬೆನ್ನೆಲುಬು. ಅವರು ಬೆಳೆಯುವ ಬೆಳೆಗಳಿಗೆ ಉತ್ತಮವಾದ ಬೆಲೆ ಸಿಗುವ ರೀತಿ ಸರ್ಕಾರ ಮತ್ತು ಮಾರುಕಟ್ಟೆಗಳು ಗಮನ ಹರಿಸಬೇಕು ಎಂದರು.

ದೇಶದಲ್ಲಿಯೇ ರೈತರ ಉತ್ಪನ್ನಗಳಿಗೆ ಉತ್ತಮ ಬೆಲೆ ಒದಗಿಸಿಕೊಡುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರವು ಕೃಷಿ ಬೆಲೆ ಆಯೋಗವನ್ನು ಮಾಡಿದೆ. ರೈತರಿಗೆ

ಅವರವರ ಉತ್ಪನ್ನಗಳಿಗೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ನೀಡಬೇಕು ಎಂದು ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ.ಟಿ.ಎನ್.ಪ್ರಕಾಶ್ ಕಮ್ಮರಡಿ ಹೇಳಿದರು.

ರೈತರು ತಮ್ಮ ಬೆಳೆಗಳಿಗೆ ತಾವೇ ಬೆಲೆಯನ್ನು ತೀರ್ಮಾನಿಸಬೇಕು. ರೈತರ ಬೆಳೆಗಳಿಗೆ ಬೆಲೆ ಕಡಿಮೆ ಆದಾಗ ಸರ್ಕಾರ ನಮ್ಮ ಪರ ಬನ್ನಿ ಎಂಬುದಾಗಿ ನಿಲ್ಲಿಸಬೇಕು. ರೈತರನ್ನು ಬಿಟ್ಟರೆ ಬೇರೆ ಯಾವುದೇ ವ್ಯಾಪರಸ್ಥರು ತಮ್ಮ ಉತ್ಪನ್ನಗಳಿಗೆ ಅವರೇ ಬೆಲೆ ತೀರ್ಮಾನ ಮಾಡುತ್ತಾರೆ. ಕರ್ನಾಟಕದಲ್ಲಿ ರೈತರ ಉತ್ಪನ್ನಗಳಿಗೆ ಗುಂಪು ಮಾರಾಟ ವ್ಯವಸ್ಥೆಗೆ ಯೋಚಿಸಿ ಯೋಜನೆ ಮಾಡಿ ಸರ್ಕಾರಕ್ಕೆ ವರದಿ ನೀಡುತ್ತೇವೆ ಎಂದು ತಿಳಿಸಿದರು.

ರೈತನಲ್ಲಿ ದೇವರನ್ನು ಕಾಣುತ್ತೇವೆ. ನಮಗೆ ಹಸಿವಾದಾಗ ರೈತರನ್ನು ನೆನಪಿಸಿಕೊಳ್ಳಬೇಕು. ರೈತರು ಮತ್ತು ವಿನಿಗಳು ಸ್ನೇಹಿತರಾಗಿರಬೇಕು. ಇದಕ್ಕೆ ಸರ್ಕಾರದ ಸಹಕಾರ ತುಂಬಾ ಮುಖ್ಯ ಎಂದು ಅಡಿಕೆ ಮಾರಾಟ ಮಹಾಮಂಡಲಿ ಅಧ್ಯಕ್ಷ ಕೋಕಡಿ ಪದ್ಮನಾಭ ಭಟ್ ಅವರು ತಿಳಿಸಿದರು.

ಅಂತರ ರಾಷ್ಟ್ರೀಯ ಮಟ್ಟದಲ್ಲಿ ಕೃಷಿ ಉತ್ಪನಗಳಿಗೆ ಉತ್ತಮ ಬೆಲೆ ಸಿಗಬೇಕು. ಆಗ, ನಮ್ಮ ರೈತರ ಆದಾಯ ದುಪ್ಪಟಗೊಳ್ಳುತ್ತದೆ ಎಂದು ಕೃಷಿ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಡಿ.ಎಲ್.ಮಹೇಶ್ವರ್ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಭಾರತೀಯ ತೋಟಗಾರಿಕೆ ನಿರ್ವಹಣಾ ಸಂಸ್ಥೆಯ ಅಧಿಕಾರಿಗಳು ಮತ್ತು ರೈತರು ಭಾಗವಹಿಸಿದರು.

**ಎಸ್‌ಎಂ:ಜೆಡಿ:ಜಿಪಿಆರ್**

ಸಂಖ್ಯೆ 30/156

## ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಹಿನ್ನೆಲೆ ನಾರಾಯಣಗುರು ಜಯಂತಿ ಮುಂದಕ್ಕೆ – ಸಚಿವೆ ಉಮಾಶ್ರೀ

**ಬೆಂಗಳೂರು, ಸೆಪ್ಟೆಂಬರ್ 6 ( ಕರ್ನಾಟಕ ವಾರ್ತೆ) :**

ನಾಡಿನ ಹಿರಿಯ ಪತ್ರಕರ್ತೆ ಗೌರಿಲಂಕೇಶ್ ಅವರ ಅಮಾನುಷ ಹತ್ಯೆಯ ಹಿನ್ನೆಲೆಯಲ್ಲಿ ಇಂದು ಸಂಜೆ 6 ಗಂಟೆಗೆ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿದ್ದ ಬ್ರಹ್ಮ ಶ್ರೀ ನಾರಾಯಣ ಗುರು ಜಯಂತಿ ಆಚರಣೆಯನ್ನು ಮುಂದೂಡಲು ಸರ್ಕಾರ ನಿರ್ಧರಿಸಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಸಚಿವ ಉಮಾಶ್ರೀ ಹೇಳಿದ್ದಾರೆ. ಜಯಂತಿ ಆಚರಣೆಯ ಮುಂದಿನ ದಿನಾಂಕವನ್ನು ನಂತರ ಪ್ರಕಟಿಸಲಾಗುವುದು ಎಂದು ಸಹ ಅವರು ಹೇಳಿದ್ದಾರೆ.

ಇದೇ ಸಂದರ್ಭದಲ್ಲಿ ಗೌರಿ ಲಂಕೇಶ್ ಹತ್ಯೆಯನ್ನು ಖಂಡಿಸಿರುವ ಸಚಿವೆ ಉಮಾಶ್ರೀ ಇದು ವೈಚಾರಿಕತೆಯ ಕಗ್ಗೊಲೆ ಎಂದು ಹೇಳಿದ್ದಾರೆ. ಈ ಘಟನೆಯ ಬಗ್ಗೆ ದಿಗ್ಭ್ರಮೆ ವ್ಯಕ್ತಪಡಿಸಿರುವ ಅವರು ಇದೊಂದು ಪೈಶಾಚಿಕ, ವಿಕೃತ ಮನಸ್ಸಿನ ಘೋರ ಕೃತ್ಯ ಎಂದು ಹೇಳಿದ್ದಾರೆ. ಪತ್ರಕರ್ತೆಯಾಗಿ ಸಾಮಾಜಿಕ ಹೋರಾಟಗಾರ್ತಿಯಾಗಿ ವೈಚಾರಿಕ ಚಿಂತನೆಯ ದಿಟ್ಟ ಮಹಿಳೆಯಾಗಿದ್ದ ಗೌರಿ ಲಂಕೇಶ್ ಮಹಿಳಾ ಸ್ವಾಭಿಮಾನದ ಸಂಕೇತವಾಗಿದ್ದರು. ಸ್ವಾವಲಂಬನೆ, ದಿಟ್ಟತನ ಮತ್ತು ಮಹಿಳೆಯರ ಸಾಮರ್ಥ್ಯಕ್ಕೆ ಮಾದರಿಯಂತಿದ್ದ ಗೌರಿ ಲಂಕೇಶ್ ಕರ್ನಾಟಕ ಕಂಡ ಅಪರೂಪದ ಮಹಿಳಾ ಹೋರಾಟಗಾರ್ತಿಯಾಗಿದ್ದರು. ಸಮಕಾಲೀನ ವಿದ್ಯಮಾನಗಳ ಬಗ್ಗೆ ಅವರಿಗಿದ್ದ ಅರಿವು ಮತ್ತು ಅವರು ಅದನ್ನು ವಿಶ್ಲೇಷಿಸುತ್ತಿದ್ದ ರೀತಿ ಬೆರಗು ಹುಟ್ಟಿಸುವಂತಿತ್ತು. ಅವರ ಹತ್ಯೆ ನಾಗರೀಕ ಸಮಾಜ ತಲೆ ತಗ್ಗಿಸುವಂತೆ ಮಾಡಿದೆ. ಕೊಲೆಗಡುಕರು ಯಾರೇ ಆಗಿರಲಿ ಅವರಿಗೆ ಅತ್ಯುಗ್ರ ಶಿಕ್ಷೆ ಆಗಬೇಕು. ವೈಯಕ್ತಿಕವಾಗಿ ನನಗೆ ಅವರ ಅಗಲಿಕೆ ಅಪಾರ ನೋವು ಮತ್ತು ಸಂಕಟ ತಂದಿದೆ ಎಂದು ಸಚಿವೆ ಉಮಾಶ್ರೀ ಹೇಳಿದ್ದಾರೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 31/157

# “ಮಹಾತ್ಮಗಾಂಧಿ ಸೇವಾ ಪ್ರಶಸ್ತಿ – ಕರ್ನಾಟಕ”
# ನಾಮನಿರ್ದೇಶನಗಳಿಗೆ ಆಹ್ವಾನ

**ಬೆಂಗಳೂರು ಸೆಪ್ಟೆಂಬರ್ 6 (ಕರ್ನಾಟಕ ವಾರ್ತೆ)**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ರಾಜ್ಯ ಸರ್ಕಾರ ಸ್ಥಾಪಿಸಿರುವ “ಮಹಾತ್ಮಗಾಂಧೀ ಸೇವಾ ಪ್ರಶಸ್ತಿ–ಕರ್ನಾಟಕ” ಗೆ ಪ್ರಸಕ್ತ ಸಾಲಿಗೆ ಅರ್ಹ ಸಾಧಕರನ್ನು ಆಯ್ಕೆ ಮಾಡಲು ವ್ಯಕ್ತಿ ಅಥವಾ ಸಂಘ ಸಂಸ್ಥೆಗಳಿಂದ ನಾಮನಿರ್ದೇಶನ ಆಹ್ವಾನಿಸಲಾಗಿದೆ.

ಸಾರ್ವಜನಿಕ ಜೀವನದಲ್ಲಿ ಮಹಾತ್ಮಗಾಂಧೀಜಿಯವರ ಆದರ್ಶಗಳನ್ನು ಅಳವಡಿಸಿಕೊಂಡು ಜೀವನ ನಡೆಸುತ್ತಿರುವ ಕನಿಷ್ಠ 60 ವರ್ಷಗಳಾಗಿರುವ ವ್ಯಕ್ತಿಗಳು ಅಥವಾ 25 ವರ್ಷಗಳು ತುಂಬಿರುವ ಸೇವಾ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರಶಸ್ತಿಯು ಐದು ಲಕ್ಷ ರೂಪಾಯಿ ನಗದನ್ನು ಒಳಗೊಂಡಿದೆ. 2017 ಅಕ್ಟೋಬರ್ 02 ರ ಗಾಂಧಿ ಜಯಂತಿಯಂದು ಪ್ರಶಸ್ತಿ ಪ್ರದಾನ ಮಾಡಲಾಗುವುದು.

ಮಹಾತ್ಮ ಗಾಂಧೀಜಿಯವರು ಪ್ರಚುರುಪಡಿಸಿದ ಜನಪರ ಕಾರ್ಯಕ್ರಮಗಳಾದ ಅಸ್ಪೃಶತೆ ನಿವಾರಣೆ, ಅಹಿಂಸೆ, ಮಹಿಳಾ ಸಬಲೀಕರಣ, ಗ್ರಾಮೀಣ ನೈರ್ಮಲ್ಯ, ಮದ್ಯಪಾನ ವಿರೋಧಿ ನೀತಿ, ಖಾದಿ ಮತ್ತು ಸ್ವದೇಶಿವಸ್ತು ಬಳಕೆ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಉದ್ದಾರ ಸೇರಿದಂತೆ ಸಾಮಾಜಿಕ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿರುವ ವ್ಯಕ್ತಿಗಳು ಅಥವಾ ಸಂಘ ಸಂಸ್ಥೆಗಳನ್ನು ಈ ಪ್ರಶಸ್ತಿಗೆ ಶಿಫಾರಸ್ಸನ್ನು ಮಾಡಬಹುದಾಗಿದೆ.

ಈ ಸಾಲಿನ ಪ್ರಶಸ್ತಿ ಆಯ್ಕೆಗಾಗಿ ರಾಜ್ಯ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಶ್ರೀ ನಾಗಮೋಹನದಾಸ್ ಅವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿದೆ. ಹಿರಿಯ ಪತ್ರಕರ್ತ ಹಾಗೂ ಗಾಂಧೀವಾದಿ ಶ್ರೀ ಖಾದ್ರಿ ಅಚ್ಯುತನ್, ಗಾಂಧೀ ಸ್ಮಾರಕ ನಿಧಿ ಉಪಾಧ್ಯಕ್ಷ ಪ್ರೊ. ಜಿ. ಬಿ. ಶಿವರಾಜ್, ಸಮಾಜಶಾಸ್ತ್ರ ನಿವೃತ್ತ ಪ್ರಾಧ್ಯಾಪಕಿ ಪ್ರೊ. ವಸಂತಮ್ಮ ಅವರು ಸದಸ್ಯರಾಗಿದ್ದಾರೆ. , ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

ನಾಮನಿರ್ದೇಶನಗಳನ್ನು ಸಲ್ಲಿಸಲು ಸೆಪ್ಟೆಂಬರ್ 13 ಕೊನೆಯ ದಿನವಾಗಿದ್ದು ಅಗತ್ಯ ವಿರಗಳೊಂದಿಗೆ ನಾಮ ನಿರ್ದೇಶನವನ್ನು ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರು ಇವರಿಗೆ ದಿನಾಂಕ : 13–09–2017 ರೊಳಗೆ ಸಲ್ಲಿಸತಕ್ಕದ್ದು. ಇ–ಮೇಲ್ **vartheinfohub@gmail.com** ವಿಳಾಸಕ್ಕೆ ಕಳುಹಿಸಬಹುದಾಗಿದೆ.

ಎಂಎಸ್:ಜೆಡಿ:ಜಿಪಿಆರ್.

ಸಂಖ್ಯೆ 32/158

## Nominations invited for Mahatma Gandhi Seva Award-Karnataka

**Bengaluru, Sep.6: Nominations are invited for Mahatma Gandhi Seva Award-Karnataka from individuals or institutions who have advocated and served people on the principles of Mahathma Gandhi. Government of Karnataka has instituted the Award through the Department of Information and Public Relations.**

**Individuals in public life who have served people and have imbibed the principles of Mahatma Gandhi, aged 60 and above or institutions which has served people for 25**

years will be considered for the award. The Award carries a cash prize of Rs. 5 lakhs. The award will be presented on October 2, 2017.

Recommendations can be made for person or institution who have promoted the ideals of Mahatma Gandhi like eradication of untouchability, Empowerment of women, Rural hygiene, use of khadi and swadeshi matetials, upliftment of schedule castes and schedule tribes, movement against consumption of alcohol and other areas wherein the persons or institution have contributed.

A committee has been constituted under the chairmanship of Justice Nagamohan Das, retired judge of supreme court for the selection of the Award. Sri Khadri S.Achyutan, Senior journalist and Gandhian, Prof. G.B.Shivaraj, Vice –Chairman, Gandhi Smaraka Trust, Prof. Vasantamma, Retd Professor of Sociology are members of the committee. Director, Department of Information and Public Relations is the member Secretary.

Last date for submission of nominations is September 13th , 2017. Nominations can be sent to Director, Department of Information and Public Relations, Bengaluru. or mail to vartheinfohub@gmail.com

## ಸಚಿವರ ಪ್ರವಾಸ

**ಬೆಂಗಳೂರು ಸೆಪ್ಟೆಂಬರ್ 6 (ಕರ್ನಾಟಕ ವಾರ್ತೆ)**

ವಸತಿ ಸಚಿವ ಎಂ. ಕೃಷ್ಣಪ್ಪ ಅವರು ಸೆಪ್ಟೆಂಬರ್ 7 ರಂದು ಮಂಡ್ಯ ಜಿಲ್ಲೆಯ ಪ್ರವಾಸ ಕೈಗೊಂಡು ವಿವಿಧ ಕಾರ್ಯಕ್ರಮಗಳು ಹಾಗೂ ಪ್ರಗತಿ ಪರಿ ಶೀಲನಾ ಸಭೆಯಲ್ಲಿ ಪಾಲ್ಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

ಛಾಯಾಚಿತ್ರ ಶೀರ್ಷಿಕೆ:

ನಾವಿಕ 4ನೇ ವಿಶ್ವ ಕನ್ನಡ ಸಮಾವೇಶವನ್ನು ಅಮೇರಿಕಾದ ಡಲ್ಲಾಸ್ ನಗರದಲ್ಲಿ ಅನಿವಾಸಿ ಭಾರತೀಯ ಸಮಿತಿ ಕರ್ನಾಟಕ ಉಪಾಧ್ಯಕ್ಷರಾದ ಡಾ: ಆರತಿ ಕೃಷ್ಣ ಅವರು ಉದ್ಘಾಟಿಸಿದರು. ಚಿತ್ರದಲ್ಲಿ ಸಮ್ಮೇಳನದ ಉಸ್ತುವಾರಿಯಾಗಿರುವ ಶ್ರೀಮತಿ ಅನು ಬೆನಕಟ್ಟಿ, ನಾವಿಕ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ರೇಣುಕಾ ರಾಮಪ್ಪ, ಸ್ವಾಮಿ ವಿವೇಕಾನಂದ ಯೋಗ ಅನುಸಂದಾನ ಸಂಸ್ಥಾನದ ಕುಲಪತಿ ಹೆಚ್.ಆರ್. ನಾಗೇಂದ್ರ ಗುರೂಜಿ ಹಾಗೂ ನಾವಿಕ ಸದಸ್ಯ ವಲ್ಲೀಶ್ ಶಾಸ್ತ್ರೀ ಅವರನ್ನು ಕಾಣಬಹುದು.